ಸೈನಿಕ ಬಾಲಕರ ವಿದ್ಯಾರ್ಥಿನಿಲಯ

1940 (2586) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಸೈನಿಕ ಬಾಲಕರ ವಿದ್ಯಾರ್ಥಿ ನಿಲಯ;

ಆ) ಇನ್ನು ಯಾವ ಯಾವ ಸ್ಥಳಗಳಲ್ಲಿ ಇಂತಹ ಶಾಲೆಗಳನ್ನು ತೆರೆಯುವ ಉದ್ದೇಶವನ್ನು ಸರ್ಕಾರ ಹೊಂದಿದೆ;

ಇ) ಅಲ್ಲಿ ವಿದ್ಯಾರ್ಥಿಗಳಿಗೆ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿ ಸೈನಿಕ ಬಾಲಕರ ವಿದ್ಯಾರ್ಥಿನಿಲಯಗಳಿರುವುದಿಲ್ಲ. ಆದರೆ ಬಿಜಾಪುರದಲ್ಲಿ ಬಾಲಕರ ಸೈನಿಕ ವಸತಿ ಶಾಲೆ ಇದೆ.

ಆ) ಸದ್ಯಕ್ಕೆ ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಇ) ಬಿಜಾಪುರ ಸೈನಿಕ ಶಾಲೆಯಲ್ಲಿ ಕಲಿಯುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಸಮವಸ್ತ್ರ ಮತ್ತು ಆಹಾರ ಭತ್ಯೆಯನ್ನು ಮತ್ತು ವಸತಿ ಸೌಕರ್ಯವನ್ನು ಕಲ್ಪಿಸಲಾಗಿದೆ.

ಕುಂದಾಪುರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ವಿಭಜನೆ

1941 (2601) ಶ್ರೀ ಕೆ.ಗೋಪಾಲ ಪೂಜಾರಿ (ಬೈಂದೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕುಂದಾಪುರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ವ್ಯಾಪ್ತಿಗೊಳಪಟ್ಟು ಕಛೇರಿ ಕೆಲಸಗಳ ಒತ್ತಡ ತುಂಬಾ ಇದ್ದು ಬೈಂದೂರು ಹೋಬಳಿ ಮಟ್ಟದಲ್ಲಿ ಶಿಕ್ಷಕರ ಸಂಖ್ಯೆ 678, ಹಿರಿಯ ಪ್ರಾಥಮಿಕ ಶಾಲೆಗಳು 84, ಕಿರಿಯ ಪ್ರಾಥಮಿಕ ಶಾಲೆಗಳು 79 ಆದ್ದರಿಂದ ಬೈಂದೂರಿಗೆ ಪ್ರತ್ಯೇಕ ವಲಯ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಮಂಜೂರು ಮಾಡಲಾಗುವುದೆ;

ಆ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು;

ಇ) ಇದಕ್ಕಿಂತಲೂ ಕಡಿಮೆ ಒತ್ತಡವಿರುವ ಉಡುಪಿ ವಲಯವನ್ನು ಹಿಂದೆ ಉಡುಪಿ-ಬ್ರಹ್ಮಾವರ ವಲಯಗಳಾಗಿ ವಿಭಜನೆ ಮಾಡಿಲ್ಲವೆ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಶಿಕ್ಷಣ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಈ ಪ್ರಸ್ತಾವನೆಯು ಹುದ್ದೆಗಳ ಸೃಜನೆಯನ್ನು ಹೊಂದಿರುವುದರಿಂದ ಪ್ರಸ್ತಾವನೆಯನ್ನು ಪರಿಶೀಲಿಸಿ 2000-2001ನೇ ಸಾಲಿಗೆ ಆಯವ್ಯಯವನ್ನು ನಿಗದಿಪಡಿಸಿಕೊಂಡು ನಂತರ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಜಿಲ್ಲಾಪಂಚಾಯತ್ ಉಡುಪಿರವರನ್ನು ಕೋರಲಾಗಿದೆ.

ಅ) ಉದ್ಭವಿಸುವುದಿಲ್ಲ.

ಇ) ಈ ಹಿಂದೆ ವಿಭಜನೆಗೊಂಡ ಉಡುಪಿ ವಲಯದಲ್ಲಿ ಕೆಲಸದ ಒತ್ತಡ ಜಾಸ್ತಿ ಇತ್ತು.

ರಾಜ್ಯದ ಮಲೆನಾಡು ಕಡೆಗಳಲ್ಲಿ ಶಿಕ್ಷಕರ ಕೊರತೆ

1942 (2603) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದ ಮಲೆನಾಡು ಕಡೆಗಳಲ್ಲಿ ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಉಡುಪಿ ಜಿಲ್ಲೆಯ ಬೈಂದೂರು ಕ್ಷೇತ್ರದಲ್ಲಿ ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಎಲ್ಲೆಲ್ಲಿ ಶಿಕ್ಷಕರ ಕೊರತೆಯಿದೆ; (ವಿವರ ನೀಡಿ)

ಇ) ವಿದ್ಯಾರ್ಥಿಗಳಿಗೆ ಇದರಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಶಿಕ್ಷಕರ ಕೊರತೆಯನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಡಾ: ಜಿ.ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಅನುಬಂಧದಲ್ಲಿ ನೀಡಲಾಗಿದೆ.

ಇ) ಬಂದಿದೆ.

ಈ) ಪದವಿ ಕಾಲೇಜುಗಳಿಗೆ ಸಂಬಂಧಿಸಿದಂತೆ ಹೆಚ್ಚುವರಿ ಕಾರ್ಯಭಾರದಿದ್ದಲ್ಲಿ ತರಗತಿಗಳನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಲು ಸರ್ಕಾರ ಅನುಮತಿ ನೀಡಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದಿಲ್ಲ.

ಪದವಿ ಪೂರ್ವ ಕಾಲೇಜುಗಳಿಗೆ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ತುಂಬಲು ನೇರ ನೇಮಕಾತಿಗೆ ಪ್ರಸ್ತಾವನೆಯನ್ನು ಸ್ವೀಕರಿಸಿದ್ದು ಮುಂದಿನ ಕ್ರಮ ಜರುಗಿಸಲಾಗುತ್ತಿದೆ ಹಾಗೂ ಬಡ್ತಿ ಮೂಲಕ ಹುದ್ದೆಗಳನ್ನು ತುಂಬಲು ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಜರುಗಿಸಲಾಗುತ್ತಿದೆ.